**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ/427/ಎಸಿಎಂ(2)/2016-17

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು - 560 001,
ದಿನಾಂಕ:22-04-2017.

**-:: ಸುತ್ತೋಲೆ ::-**

**ವಿಷಯ:** 2017-18ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಪ್ರಥಮ ಡಿಪ್ಲೋಮಾ ಪ್ರವೇಶಾತಿಯನ್ನು **"ಆನ್‌ಲೈನ್ ಇಂಟರಾಕ್ಟೀವ್ ಕೌನ್ಸಲಿಂಗ್"** ಮೂಲಕ ಸೀಟು ಹಂಚಿಕೆ ಡಿಪ್ಲೋಮಾ ಪ್ರವೇಶ ಪ್ರಕ್ರಿಯೆ ನಡೆಸಲು ಪೂರ್ವಭಾವಿ ಸಿದ್ಧತೆ ಕುರಿತು ಸಭೆ.

**ಉಲ್ಲೇಖ:** ಸರ್ಕಾರದ ಆದೇಶ ಸಂ. ಇಡಿ 207 ಟಿಜಿಎಲ್ 2016, ದಿ:20-03-2017.

**-0000000-**

ಉಲ್ಲೇಖ(1)ರ ಸರ್ಕಾರಿ ಆದೇಶದ ಪ್ರಕಾರ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ 2017-18ನೇ ಸಾಲಿನಿಂದ ಅನ್ವಯವಾಗುವಂತೆ **ಪ್ರಥಮ ಡಿಪ್ಲೋಮಾ ಪ್ರವೇಶಾತಿಯನ್ನು "ಆನ್‌ಲೈನ್ ಇಂಟರಾಕ್ಟೀವ್ ಕೌನ್ಸಲಿಂಗ್"** ಮೂಲಕ ನಡೆಸಲು ಆದೇಶಿಸಿರುತ್ತದೆ. ಅಭ್ಯರ್ಥಿಗಳು ತಮ್ಮ ಇಚ್ಛೆಗೆ ಅನುಗುಣವಾಗಿ ಕೋರ್ಸು ಮತ್ತು ಪಾಲಿಟೆಕ್ನಿಕ್‌ನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶವನ್ನು ಕಲ್ಪಿಸಲಾಗಿದೆ.

ಈ ನಿಟ್ಟಿನಲ್ಲಿ, **ದಿ:25-04-2017ರಂದು ಪೂರ್ವಾಹ್ನ 11.00 ಘಂಟೆಗೆ ಸಭೆಯನ್ನು TEQIP ಸಭಾಂಗಣ, ಮೊದಲನೇ ಮಹಡಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು** ಇಲ್ಲಿ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳ ಸಭೆಯನ್ನು ಕರೆಯಲಾಗಿರುತ್ತದೆ. ಪ್ರಯುಕ್ತ, ಸದರಿ ಸಭೆಗೆ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು ಹಾಗೂ ಒಬ್ಬರು ನುರಿತ ಕಂಪ್ಯೂಟರ್ ಸೈನ್ಸ್ ವಿಭಾಗದ ಉಪನ್ಯಾಸಕರುಗಳ ಜೊತೆಗೆ ತಪ್ಪದೇ ಹಾಜರಾಗಲು ಸೂಚಿಸಲಾಗಿದೆ.

ನಿರ್ದೇಶಕರು

22/04

ಗೆ,

**ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರುಗಳಿಗೆ,**

ಪ್ರತಿ:-

1. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
2. ಜಂಟಿ ನಿರ್ದೇಶಕರು(ಯೋಜನೆ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
3. ಜಂಟಿ ನಿರ್ದೇಶಕರು(ಪರೀಕ್ಷೆ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
4. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂ.ಶಿ.ನಿ, ಬೆಂಗಳೂರು.

5. ನಿರ್ದೇಶಕರ ಆಪ್ತಶಾಖೆಗೆ.
6. ಸಂಯೋಜನಾಧಿಕಾರಿಗಳು, ಇ–ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ. ಬೆಂಗಳೂರು – ಸದರಿ ಪ್ರಕಟಣೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಕೋ–ಆರ್ಡಿನೇಟರ್, **TEQIP** – ಸದರಿ ದಿನಾಂಕದಂದು ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಸಭೆಯನ್ನು ಕರೆದಿದ್ದು ಸಭೆಗೆ ಅನುಕೂಲವಾಗುವಂತೆ ಸೂಕ್ತ ವ್ಯವಸ್ಥೆಯನ್ನು ಮಾಡಲು ಸೂಚಿಸಲಾಗಿದೆ.
8. ಕಛೇರಿ ಪ್ರತಿ.